**ಕ್ರೀಡಾ ಸಾಧನೆ** | ಕಾರ್ಕಳ: ಮಂಗಳೂರು ವಿ.ವಿ. ಮಟ್ಟದ ಅಂತರ್ ಕಾಲೇಜು ಮಹಿಳಾ ಕಬಡ್ಡಿ ಪಂದ್ಯಾವಳಿ

# ಉಜಿರೆಯ ಎಸ್‌ಡಿಎಂ ಕಾಲೇಜಿಗೆ ಚಾಂಪಿಯನ್‌ಶಿಪ್ ಪ್ರಶಸ್ತಿ

• **ಕನ್ನಡಪ್ರಭ ವಾರ್ತೆ** ಕಾರ್ಕಳ

ಇಲ್ಲಿನ ಮಂಜುನಾಥ್ ಪೈ ಸ್ಮಾರಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಮಂಗಳೂರು ವಿ.ವಿ. ಆಯೋಜಿಸಿದ್ದ ಮಂಗಳೂರು ವಿ.ವಿ. ಮಟ್ಟದ ಅಂತರ್ ಕಾಲೇಜು ಮಹಿಳಾ ಕಬಡ್ಡಿ ಚಾಂಪಿಯನ್ ಶಿಪ್‌ನ ಅಂತಿಮ ಪಂದ್ಯದಲ್ಲಿ ಉಜಿರೆಯ ಎಸ್‌ಡಿಎಂ ಕಾಲೇಜು ತಂಡವು ಮೂಡುಬಿದಿರೆಯ ಆಳ್ವಾಸ್ ಕಾಲೇಜಿನ ತಂಡವನ್ನು ಸೋಲಿಸಿ ಚಾಂಪಿಯನ್‌ಶಿಪ್ ಪ್ರಶಸ್ತಿ ಜಯಿಸಿದೆ.

ಸತತ ಹದಿನಾಲ್ಕು ವರ್ಷಗಳಿಂದ ಚಾಂಪಿಯನ್‌ಶಿಪ್ ಪಟ್ಟ ಮುಡಿಗೇರಿಸಿಕೊಂಡಿದ್ದ ಆಳ್ವಾಸ್ ಈ ಬಾರಿ ರನ್ನರ್ ಅಪ್ ಸ್ಥಾನಕ್ಕೆ ತೃಪ್ತಿಪಟ್ಟುಕೊಳ್ಳುವಂತಾಯಿತು. ಎರಡು ದಿನಗಳ ಕಾಲ ನಡೆದ, 34 ತಂಡಗಳು ಭಾಗವಹಿಸಿದ್ದ ಪಂದ್ಯಾವಳಿಯ ರೋಲಿಂಗ್ ಟ್ರೋಫಿ ವೆರಿ ರೆವ್‌ರೆಂಡ್ ಎ ಪಟ್ರಾವೊ ಸ್ಮಾರಕ ಟ್ರೋಫಿಯನ್ನು ಚಾಂಪಿಯನ್ ತಂಡಕ್ಕೆ ಹಸ್ತಾಂತರಿಸಲಾಯಿತು.

ಆಳ್ವಾಸ್ ಕಾಲೇಜ್ ಆಫ್ ಫಿಸಿಕಲ್ ಎಜುಕೇಶನ್ ತಂಡವು ಮೂರನೇ ಹಾಗೂ ಮಂಗಳೂರಿನ ಸ್ಕಾರಿ ಪ್ರಥಮ ದರ್ಜೆ ಕಾಲೇಜು ಕಾರ್‌ಸ್ಟ್ರೀಟ್ ನಾಲ್ಕನೇ ಸ್ಥಾನ



KP

ಮಂಗಳೂರು ವಿ.ವಿ. ಮಟ್ಟದ ಅಂತರ್ ಕಾಲೇಜು ಮಹಿಳಾ ಕಬಡ್ಡಿ ಪಂದ್ಯಾವಳಿಯ ವಿಜೇತ ತಂಡ ಪ್ರಶಸ್ತಿಯೊಂದಿಗೆ.

ಪಡೆದಿದೆ. ಆಳ್ವಾಸ್ ಕಾಲೇಜಿನ ಆಟಗಾರ್ತಿ ಆತ್ಮೀಯ ಅತ್ಯುತ್ತಮ ಡಿಫೆಂಡರ್ ಪ್ರಶಸ್ತಿ ಪಡೆದರೆ, ಎಸ್‌ಡಿಎಂ ಕಾಲೇಜಿನ ಮಾನಸ ಅತ್ಯುತ್ತಮರೈಡರ್ ಆಗಿಹೊರಹೊಮ್ಮಿದ್ದಾರೆ. ಪಂದ್ಯಾವಳಿಯ ಅತ್ಯುತ್ತಮ ಆಲ್‌ರೌಂಡರ್ ಪ್ರಶಸ್ತಿಯನ್ನು ಎಸ್‌ಡಿಎಂ ಕಾಲೇಜಿನ ಕವಿತಾ ಪಡೆದರು.

ಪ್ರಿಲಿಮಿನರಿ ಸುತ್ತಿನಲ್ಲಿ ಅಜ್ಜರಕಾಡು ಡಾ.ಜಿ. ಶಂಕರ್ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಪ್ರಥಮ, ಮಂಗಳೂರು ವಿವಿ ಕ್ಯಾಂಪಸ್ ಕಾಲೇಜು ದ್ವಿತೀಯ, ನೆಹರೂ ಮೆಮೊರಿಯಲ್ ಕಾಲೇಜು ಸುಳ್ಯ ತೃತೀಯ ಹಾಗೂ ಅತಿಥೇಯ ಮಂಜುನಾಥ ಪೈ ಸ್ಮಾರಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನಾಲ್ಕನೇ ಸ್ಥಾನ ಗಳಿಸಿದೆ. ಅತ್ಯುತ್ತಮ ಡಿಫೆಂಡರ್ ಪ್ರಶಸ್ತಿ ಎನ್‌ಎಂಸಿ ಸುಳ್ಯದ ಆಶಾ ಪಡೆದರೆ, ಮಂಗಳೂರು ವಿವಿಯ ತೃಪ್ತಿ ಅತ್ಯುತ್ತಮ ರೈಡರ್ ಆಗಿ ಹೊರಹೊಮ್ಮಿದ್ದಾರೆ. ಪ್ರಿಲಿಮಿನರಿ ಪಂದ್ಯಾವಳಿಯ ಅತ್ಯುತ್ತಮ ಆಲ್‌ರೌಂಡರ್ ಪ್ರಶಸ್ತಿ ಎಸ್‌ಡಿಎಂ ಕಾಲೇಜಿನ ನಿಧಿ ಎಂ. ಶೆಟ್ಟಿ ಪಡೆದರು.

ಪ್ರಶಸ್ತಿ ವಿತರಣಾ ಸಮಾರಂಭದಲ್ಲಿ ಅಂತಾರಾಷ್ಟ್ರೀಯ ಕ್ರೀಡಾಪಟು ಅಪ್ಸರಾ ಆರ್. ಕಟೀಲು ಮಾತನಾಡಿ, ಪ್ರಾಯೋಜಕತ್ವದಲ್ಲಿ ನಡೆಯುತ್ತಿರುವ ಪ್ರೊ ಕಬಡ್ಡಿ ಲೀಗ್ ಪಂದ್ಯಗಳು ಪುರುಷರಿಗಷ್ಟೇ ಸೀಮಿತವಾಗಿವೆ. ಇದನ್ನು ಮಹಿಳೆಯರಿಗೂ ನಡೆಸಿದರೆ, ಮಹಿಳಾ ಕ್ರೀಡಾಪಟುಗಳಿಗೆ ಹೆಚ್ಚಿನ ಪ್ರೋತ್ಸಾಹ ಹಾಗೂ ಜನಪ್ರಿಯತೆ ಸಿಕ್ಕಂತಾಗುತ್ತದೆ. ಮಹಿಳಾ ಕ್ರೀಡಾಪಟುಗಳೂ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಮಿಂಚಲು ಅವಕಾಶ ದೊರೆಯುತ್ತದೆ ಎಂದರು.

ಪ್ರಾಂಶುಪಾಲ ಶ್ರೀವರ್ಮ ಅಜ್ರಿ ಎಂ. ಅಧ್ಯಕ್ಷತೆ ವಹಿಸಿದ್ದರು. ಮಂಗಳೂರು ವಿವಿಯ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಡಾ. ಕಿಶೋರ್ ಕುಮಾರ್ ಸಿ.ಕೆ., ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯ ಪ್ರಭಾಕರ ಬಂಗೇರ, ಕಾರ್ಕಳ ಎಪಿಎಂಸಿ ಮಾಜಿ ಅಧ್ಯಕ್ಷ ಅತ್ತೂರು ಬಾಲಕೃಷ್ಣ ಹೆಗ್ಡೆ, ಪುರಸಭಾ ಸದಸ್ಯೆ ಮಮತಾ ಉಪಸ್ಥಿತರಿದ್ದರು.

ವಾಣಿಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ನವೀನ್ ಸ್ವಾಗತಿಸಿದರು. ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಕೃಷ್ಣಮೂರ್ತಿ ವೈದ್ಯ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಂಥಪಾಲಕ ವೆಂಕಟೇಶ್ ಕಾರ್ಯಕ್ರಮ ನಿರೂಪಿಸಿದರು. ಇಂಗ್ಲಿಷ್ ಭಾಷಾ ಸಹಪ್ರಾಧ್ಯಾಪಕ ಯೋಗೇಶ್ ಡಿ. ಎಚ್. ಪ್ರಶಸ್ತಿ ವಿತರಣಾ ಕಾರ್ಯಕ್ರಮ ನಿರ್ವಹಿಸಿದರು.

ಕನ್ನಡ ಪ್ರಭ 30/09/19